ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

15

ಇಲಾಖೆ / ವಿಷಯ : DEPARTMENT / SUBJECT: ಸಹಕಾರ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 22/11/21

# 15 ಸಾವಿರ ಕೋಟಿ ಸಾಲ ವಿತರಣೆ ಗುರಿ

**ಬೆಂಗಳೂರು ಗ್ರಾಮಾಂತರ:** ರಾಜ್ಯದಲ್ಲಿ 24.50 ಲಕ್ಷ ರೈತರಿಗೆ 15.3 ಸಾವಿರ ಕೋಟಿ ರೂ. ಬೆಳೆ ಸಾಲ ವಿತರಣೆ ಗುರಿ ಹೊಂದಲಾಗಿದ್ದು ಫೆಬ್ರವರಿ ಮಾಸಾಂತ್ಯಕ್ಕೆ ಗುರಿ ಮುಟ್ಟುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ರಾಜ್ಯಾದ್ಯಂತ ಡಿಸಿಸಿ ಬ್ಯಾಂಕುಗಳಲ್ಲಿ ಉತ್ತಮ ಪ್ರತಿಕ್ರಿಯೆ ಕಂಡುಬಂದಿದೆ ಎಂದು ಸಹಕಾರ ಸಚಿವ ಎಸ್.ಟಿ ಸೋಮಶೇಖರ್ ಹೇಳಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ, ದೇವನಹಳ್ಳಿ ಡಿಸಿಸಿ ಬ್ಯಾಂಕ್‌ಗಳ ಶಾಖೆಗಳಿಗೆ ಭೇಟಿ ನೀಡಿ ಮಾತನಾಡಿದ ಅವರು, ಬಿಜೆಪಿ ಜನಪರ, ರೈತಪರ ಸರಕಾರವಾಗಿದ್ದು ಕೊಟ್ಟ ಮಾತನ್ನು ತಪ್ಪುವ ಪ್ರಶ್ನೆಯೇ ಇಲ್ಲ, ಈ ಬಾರಿ ರೈತರಿಗೆ ನೀಡಬೇಕೆಂದಿರುವ ಬೆಳೆ ಸಾಲದ ಗುರಿ ಮುಟ್ಟುವ ಸಲುವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ. ಗುರಿ ತಲುಪಲು 'ಸಹಕಾರ ನಡಿಗೆ ಡಿಸಿಸಿ ಬ್ಯಾಂಕ್ ಕಡೆಗೆ' ಕಾರ್ಯಕ್ರಮದ ಮೂಲಕ ರಾಜ್ಯಾದ್ಯಂತ ಡಿಸಿಸಿ ಬ್ಯಾಂಕುಗಳಿಗೆ ಭೇಟಿಯಾಗಿ ಮಾಹಿತಿ ಪಡೆಯಲಾಗುತ್ತಿದೆ ಎಂದರು. ಕೊರೊನಾ ಸಂಕಷ್ಟದ ಕಾಲದಲ್ಲಿ ಸಾಲ ಕೊಡುವುದೇ ಕಷ್ಟ ಎಂಬ ಸ್ಥಿತಿಯಲ್ಲಿಯೂ ಸಿಎಂ ಬಿ.ಎಸ್. ಯಡಿಯೂರಪ್ಪ ಅವರು ಕಳೆದ ಸಾಲಿಗಿಂತ ಈ ಬಾರಿ ಹೆಚ್ಚು ಬೆಳೆಸಾಲ ನೀಡಲು ಸೂಚಿಸಿದ್ದರು. ಈ ಹಿನ್ನೆಲೆ 15.3ಸಾವಿರ ಕೋಟಿ ರೂ. ಸಾಲ ನೀಡುವ ಗುರಿ ಹೊಂದಿದ್ದು, ಒಟ್ಟು 24.50ಲಕ್ಷ ರೈತರಿಗೆ ಇದರಿಂದ ಉಪಯೋಗವಾಗುತ್ತಿದೆ ಎಂದು ಹೇಳಿದರು.



**ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ಟಿಎಪಿಸಿಎಂಎಸ್ ಶಾಖೆಗೆ ಸಹಕಾರ ಸಚಿವ ಎಸ್.ಟಿ. ಸೋಮಶೇಖರ್ ಭೇಟಿ ನೀಡಿ ಪರಿಶೀಲಿಸಿದರು.**